30

**ಮಾನ್ಯ, ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ ರವರು ನಿಯಮ 330ರಡಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ**

**ವಿಷಯ :** ರಾಜ್ಯದ ಅಡಿಕೆ ತೋಟಗಳಲ್ಲಿ ಕೊಳೆ ರೋಗ ಕಾಣಿಸಿಕೊಂಡು ವ್ಯಾಪಕವಾಗಿ ಹರಡುತ್ತಿದ್ದು, ಅಡಕೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವಧಿಗೆ ಮುನ್ನ ಹಾಗೂ ಅತಿಯಾದ ನಿರಂತರ ಮಳೆಯಿಂದಾಗಿ ಅಡಿಕೆಗೆ ಕೊಳೆರೋಗ ತೀವ್ರವಾಗಿ ಬಾಧಿಸಿರುವುದರಿಂದ ಅಡಿಕೆ ನಳ್ಳಿ (ಮಿಡಿ) ವಿಪರೀತ ಮಟ್ಟದಲ್ಲಿ ಉದುರಿಹೋಗಿ, ಫಸಲು ಅತಿಯಾಗಿ ಕುಸಿದಿರುವುದರಿಂದ ಅಡಿಕೆ ಬೆಳೆಗಾರರಿಗೆ ತುಂಬಾ ನಷ್ಟವಾಗಿದೆ.

ಅಡಕೆ ತೋಟಗಳಿಗೆ ಕೊಳೆ ರೋಗ ಮತ್ತಷ್ಟು ಆವರಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದರ ಜೊತೆಗೆ ಕೊಳೆ ರೋಗದ ನಿಯಂತ್ರಣಕ್ಕೆ ಪರಿಣಾಮಕಾರಿ ಹಾಗೂ ತುರ್ತು ಕ್ರಮಗಳನ್ನು ಕೈಗೊಂಡು ಸಂಕಷ್ಟದಲ್ಲಿರುವ ಅಡಕೆ ಬೆಳೆಗಾರರ ಹಿತರಕ್ಷಣೆಗೆ ಮುಂದಾಗಬೇಕಾಗಿದ್ದ ಸರ್ಕಾರ ಇದುವರೆಗೆ ಯಾವುದೇ ಕ್ರಮವಹಿಸದೇ ಪರಿಸ್ಥಿತಿಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ :** ರಾಜ್ಯದಲ್ಲಿ ಅಡಿಕೆ ಬೆಳೆಯನ್ನು 6.92 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, ಇದರ ಉತ್ಪಾದನೆ ಅಂದಾಜು 10.19 ಲಕ್ಷ ಮೆ.ಟನ್ ಗಳಾಗಿರುತ್ತದೆ. ಅಡಿಕೆ ಬೆಳೆಯನ್ನು ಪ್ರಮುಖವಾಗಿ ಶಿವಮೊಗ್ಗ, ದಕ್ಷಿಣ ಕನ್ನಡ, ತುಮಕೂರು, ಹಾಸನ, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಉತ್ತರಕನ್ನಡ ಹಾಗೂ ಕೊಡಗು ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ. ಹವಾಮಾನ ವೈಪರೀತ್ಯದಿಂದಾಗಿ ವಾತಾವರಣದಲ್ಲಿ ಕಡಿಮೆ ಉಷ್ಣಾಂಶ (20 ರಿಂದ 25 ಡಿಗ್ರಿ ಸೆಂಟಿ ಗ್ರೇಡ್ ಗಿಂತ ಕಡಿಮೆ), ಅಧಿಕ ತೇವಾಂಶ ಶೇ > 90% ರಷ್ಟು ಹಾಗೂ ಮಳೆಯ ಏರು ಪೇರುನಿಂದಾಗಿ ಮೋಡ ಕವಿದ ವಾತಾವರಣದಿಂದ ಅಡಿಕೆ ಬೆಳೆಯು ಹಾನಿಗೊಳಗಾಗಿದೆ.

**ಅಡಿಕೆ ಕೊಳೆರೋಗ ನಿಯಂತ್ರಿಸಲು ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:**

1. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಸಸ್ಯ ಸಂರಕ್ಷಣಾ ಔಷಧಿಗಳ ಖರೀದಿಗೆ ರೂ. 5,000 ಪ್ರತಿ ಹೆಕ್ಟೇರ್ ಘಟಕ ವೆಚ್ಚದಲ್ಲಿ ರೈತರಿಗೆ ಪ್ರತಿ ಹೆಕ್ಟೇರ್ ಗೆ ರೂ.1,500 ಗಳಂತೆ 2 ಹೆಕ್ಟೇರ್ ವರೆಗೆ ರೂ.3,000 ಗಳ ಸಹಾಯಧನ ನೀಡಲಾಗುತ್ತಿದೆ. ಈ

ಯೋಜನೆಯಡಿ ಅಡಿಕೆ ಕೊಳೆ ರೋಗ ನಿಯಂತ್ರಣಕ್ಕೆ ಶೇ.1ರ ಬೋರ್ಡೋ ದ್ರಾವಣ, ಪ್ರೋಪಿಕೋನೋಜೋಲ್, ಕಾಪರ್ ಆಕ್ಸಿ ಕ್ಲೋರೈಡ್ ಹಾಗೂ ಇತರೆ ಶಿಲೀಂದ್ರ ನಾಶಕಗಳನ್ನು ಬಳಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ರೂ.525.00 ಲಕ್ಷಗಳ ಅನುದಾನ ನಿಗಧಿಯಾಗಿದೆ.

2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ಸದರಿ ಯೋಜನೆಯಡಿ ನಷ್ಟ ಪರಿಹಾರವನ್ನು ಒದಗಿಸಲಾಗುತ್ತಿದೆ.

3. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ, ತರಬೇತಿ ಹಾಗೂ ಪ್ರಾತ್ಯಕ್ಷತೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

4. ಹಿಂದಿನ ಸಾಲಿನಲ್ಲಿ ಬೆಳೆ ಹಾನಿಯಾಗಿರುವ ಅಂದಾಜು 79,123.67 ಹೆಕ್ಟೇರ್ ಪ್ರದೇಶಕ್ಕೆ ಪ್ರತಿ ಹೆಕ್ಟೇರ್ ಗೆ NDRF/SDRF ಮಾರ್ಗಸೂಚಿಯನ್ವಯ ರೂ.22,500/-ಗಳಂತೆ ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು ಕೇಂದ್ರ ಸರ್ಕಾರಕ್ಕೆ ರೂ.178.03 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

**HORTI 369 HGM 2025**

(ಎಸ್.ಎಸ್.ಮಲ್ಲಿಕಾರ್ಜುನ್)

**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**